1ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ
ಬೆಂಗಳೂರು ನಗರ

ಸಿ.ಸಿ. ನಂ. 20364-2020

ಸಿಡಬ್ಲೂ -15 ಪಿಡಬ್ಲೂ-3

ಸಾಕ್ಷಿದಾರರ ಹೆಸರು : ಮಂಜುನಾಥ
ತಂದೆಯ ಹೆಸರು : ಮುನಿಸ್ವಾಮಿ
ವಯಸ್ಸು : 47 ವರ್ಷ
ಕೆಲಸ : ಪಿಐ, ಐ ಎಸ್ ಟಿ
ವಾಸ : ಬೆಂಗಳೂರು

ಸಾಕ್ಷಿಯನ್ನು ದಿನಾಂಕಃ 25-09-2025 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.
ಮುಖ್ಯ ವಿಚಾರಣೆ ಹಿ.ಸ.ಸಾ.ಅ. ರವರಿಂದಃ

ನಾನು ಅಕ್ಟೋಬರ್ 2019 ರಿಂದ ಡಿಸೆಂಬರ್ 2022 ರವರೆಗೆ ಸದಾಶಿವನಗರ ಪೋಲೀಸ್ ಠಾಣೆಯಲ್ಲಿ ಪಿ.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ 14 ರವರಿಂದ ಸ್ವೀಕರಿಸಿ ಪರಿಶೀಲಿಸಿ ತನಿಖೆಯನ್ನು ಮುಂದುವರಿಸಿರುತ್ತೇನೆ. ಕ್ರೈಮ ನಂ. 77/2020 ರಲ್ಲಿ ದಸ್ತಗಿರಿ ಪಡಿಸಲಾಗಿದ್ದ ಆರೋಪಿಗಳು ತಮ್ಮ ಸ್ವಇಚ್ಛಾ ಹೇಳಿಕೆಯಲ್ಲಿ ಈ ಪ್ರಕರಣದಲ್ಲಿ ಭಾಗಿಯಾಗಿರುವ ಬಗ್ಗೆ ತಿಳಿಸಿದ ಕಾರಣ ಸದರಿ ಪ್ರಕರಣದ ಕಡತಗಳನ್ನು ಸ್ವೀಕರಿಸಿ ಈ ಪ್ರಕರಣಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಕೈಮ ನಂ. 77/2020 ರ ದೂರು, ಪ್ರ.ವ.ವರದಿ, ಮತ್ತು ಅಮಾನತ್ತು ಪಂಚನಾಮೆಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ. 4 ರಿಂದ 6 ಎಂದು ಗುರುತಿಸಲಾಯಿತು. ಆರೋಪಿಗಳು ಕೃತ್ಯಕ್ಕೆ ಬಳಸಲಾಗಿದ್ದ ಆಯುಧಗಳನ್ನು ಸಹ ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಒಂದು ಸ್ಯಾಮಸಂಗೆ ಮೊಬೈಲ್ ನ್ನು ಈ ಪ್ರಕರಣಕ್ಕೆ ಸ್ವೀಕರಿಸಿ ಅಳವಡಿಸಿಕೊಂಡಿರುತ್ತೇನೆ.

ಮೊಬೈಲ್ ಫೋನ್ ಮತ್ತು ರಕ್ತಕಲೆಯಾದ ಟಿ ಶರ್ಟ ನ್ನು ಹಾಜರುಪಡಿಸದೇ ಇರುವ ಕಾರಣ ಮುಂದುವರಿದ ಮುಖ್ಯ ವಿಚಾರಣೆಗಾಗಿ ಮುಂದುಲಾಯಿತು

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು. ಸಾಕ್ಷಿಯ ಎದುರಿನಲ್ಲಿ ಓದಿ ಹೇಳಿದ ಮೇಲೆ ಸರಿ ಇದೆ ಎಂದು ಒಪ್ಪಿ ಸಹಿ ಮಾಡಲಾಯಿತು.)

ಓ ಹೇ ಕೇ ಸ ಇ ಒ

1 ನೇ ಅ. ಮು. ನ್ಯಾ.ದಂ. ನ್ಯಾ